**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.**

| | |
|---|---|
| ಸಿ.ಸಿ. ನಂಬರ್ | : 08/2022 |
| ಸಿ.ಡಬ್ಲೂ | : 09 |
| ಪಿ.ಡಬ್ಲೂ | : 09 |
| ಸಾಕ್ಷಿಯ ಹೆಸರು | : ಯಲ್ಲಪ್ಪ ರಾಯಪ್ಪ ಕುರಿ |
| ವಯಸ್ಸು | : 62 ವರ್ಷ |
| ಉದ್ಯೋಗ | : ಒಕ್ಕಲುತನ |
| ವಾಸ ಸ್ಥಳ | : ನವಲಗುಂದ |

ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕಃ 27.08.2026.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ಪ್ರಕರಣದ ಆರೋಪಿತರ ಪರಿಚಯ ಇಲ್ಲ. ಚಾಸಾ-1, 4 ರಿಂದ 6, 7 ಮತ್ತು 8 ರವರ ಪರಿಚಯವಿಲ್ಲ. ಪ್ರಕರಣಕ್ಕೆ ಸಂಬಂಧಿಸಿ ನನಗೇನು ಮಾಹಿತಿ ಇಲ್ಲ. ಪ್ರಕರಣಕ್ಕೆ ಸಂಬಂಧಿಸಿ ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ- ಮಾನ್ಯ ಸ.ಸ.ಅ. ರವರಿಂದಃ**

ದಿಃ 25-10-2014 ರಂದು ಬೆ.08.30 ಗಂಟೆಗೆ ಚಾಸಾ-1 ರವರು ವಾಸವಿರುವ ಮನೆಯ ಕುರಿತು ಹಣ ಕೊಡುವಂತೆ ಆರೋಪಿತರು ಕೇಳಿದ್ದು, ಹಣ ಕೊಡದೇ ಹೋದರೆ ಮನೆಯನ್ನು ಬಿಟ್ಟು ಹೋಗಿ ಎಂದು ಜಗಳ ತೆಗೆದಿದ್ದು, 1 ನೇ ಆರೋಪಿ ಚಾಸಾ-1 ರವರಿಗೆ ಕೈಯಿಂದ ಹೊಡೆಬಡೆ ಮಾಡಿರುತ್ತಾನೆ ಎಂದರೆ ಸರಿಯಲ್ಲ. ನಂತರ 2 ನೇ ಆರೋಪಿ ಬಡಿಗೆಯಿಂದ ಚಾಸಾ-1 ರವರ ಬಾಯಿಗೆ ಹೊಡೆದು ಹಲ್ಲು ಕಿತ್ತು ಹೋಗಿ ರಕ್ತ ಬರುವಂತೆ ಹಲ್ಲೆ ಮಾಡಿರುತ್ತಾನೆ ಎಂದರೆ ಸರಿಯಲ್ಲ. ನಂತರ ಆರೋಪಿತರು ಚಾಸಾ-4 ರವರಿಗೆ ಕೈಯಿಂದ ಹಾಗೂ ಕಟ್ಟಿಗೆಯಿಂದ ಹೊಡೆದಿರುತ್ತಾನೆ

ಎಂದರೆ ಸರಿಯಲ್ಲ. ನಂತರ ಜಗಳ ಬಿಡಿಸಲು ಬಂದ ನನಗೆ 1 ನೇ ಆರೋಪಿ ಬಡಿಗೆಯಿಂದ ಹೊಡೆಬಡೆ ಮಾಡಿ ಜೀವದ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಈ ಮೇಲಿನಂತೆ ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಅಲ್ಲಗೆಳೆದ ಭಾಗವನ್ನು **ನಿಪಿ-7** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾವಾಗಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎಸ್ ಎಂ ಎಚ್ ವಕೀಲರಿಂದಃ**

ಏನು ಇಲ್ಲ ಎಂದರೆ ತಿಳಿಸಿರುತ್ತಾರೆ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**